**Akashvani : Bangalore**
**National Bulletin In Kannada**
**15.03.2025 / 19.35 hrs**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**15.03.2025 / 19.35 hrs**

**<><*<><>*><>**

ಮುಖ್ಯಾಂಶಗಳು

**೧.	ವಿದ್ಯಾರ್ಥಿಗಳು ಅಭಿವೃದ್ಧಿಪಡಿಸುವ ನವೋದ್ಯಮಗಳಿಗೆ ಕೇಂದ್ರದ ಉತ್ತೇಜನ**

**೨.	ಈಶಾನ್ಯ ರಾಜ್ಯಗಳಲ್ಲಿ ಸುಧಾರಿಸಿದ ಕಾನೂನು ಸುವ್ಯವಸ್ಥೆ - ಕೇಂದ್ರ ಸಚಿವ ಅಮಿತ್ ಶಾ**

**೩.	ಡಬ್ಲ್ಯು -೩೫ ನಾಂತಬುರಿ ಟೆನಿಸ್; ಮಹಿಳಾ ಡಬಲ್ಸ್ ವಿಭಾಗದಲ್ಲಿ ಭಾರತದ ಜೋಡಿಗೆ ಜಯ**

**೪.	ಮಹಿಳಾ ಪ್ರೀಮಿಯರ್ ಲೀಗ್ ಕ್ರಿಕೆಟ್; ಫೈನಲ್‌ನಲ್ಲಿ ಡೆಲ್ಲಿ ಕ್ಯಾಪಿಟಲ್ಸ್ -ಮುಂಬೈ ಇಂಡಿಯನ್ಸ್ ಮುಖಾಮುಖಿ**

**<><*<><>*><>**

ವಿದ್ಯಾರ್ಥಿಗಳು ಅಭಿವೃದ್ಧಿಪಡಿಸುವ ನವೋದ್ಯಮಗಳಿಗೆ ಕೇಂದ್ರ ಸರ್ಕಾರ ಉತ್ತೇಜನ ನೀಡಲಿದೆ ಎಂದು ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ ತಮಿಳುನಾಡಿನ ಶ್ರೀಪೆರಂಬದೂರಿನಲ್ಲಿ ಜೆಟ್‌ವರ್ಕ್ ಎಲೆಕ್ಟ್ರಾನಿಕ್ಸ್‌ನ ಹೊಸ ಕ್ಯಾಂಪಸ್ ಉದ್ಘಾಟಿಸಿ ಅವರು ಮಾತನಾಡಿದರು. ಎಲೆಕ್ಟ್ರಾನಿಕ್ಸ್, ಸಂವಹನ ಮತ್ತು ಡಿಜಿಟಲ್ ಮೂಲಸೌಕರ್ಯ ಸೇರಿದಂತೆ ಎಲ್ಲಾ ವಲಯಗಳಲ್ಲಿ ಭಾರತ ತ್ವರಿತ ಅಭಿವೃದ್ಧಿ ಸಾಧಿಸುತ್ತಿದೆ. ಶ್ರೀಪೆರಂಬುದೂರು ಮಣಲೂರಿನಲ್ಲಿ ೧ ಸಾವಿರದ ೧೧೨ ಕೋಟಿ ರೂಪಾಯಿ ವೆಚ್ಚದಲ್ಲಿ ೨ ಎಲೆಕ್ಟ್ರಾನಿಕ್ಸ್ ಕೈಗಾರಿಕೆಗಳನ್ನು ಸ್ಥಾಪಿಸಲಾಗುವುದು ಎಂದರು. ಎಲೆಕ್ಟ್ರಾನಿಕ್ ಉತ್ಪನ್ನಗಳನ್ನು ರಫ್ತು ಮಾಡುವಲ್ಲಿ ಭಾರತ ಎರಡನೇ ರಾಷ್ಟ್ರವಾಗಿದೆ ಎಂದು ಅವರು ಹೇಳಿದರು. ಇದಕ್ಕೂ ಮುನ್ನ ಚೆನ್ನೈ ವಿಮಾನ ನಿಲ್ದಾಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ತಮಿಳುನಾಡಿನಲ್ಲಿ ಬಂಡವಾಳ ಹೂಡಲು ಕೇಂದ್ರ ಸರ್ಕಾರ ಪ್ರೋತ್ಸಾಹಕ ಕ್ರಮಗಳನ್ನು ಕೈಗೊಂಡಿದೆ ಎಂದರು.

**<><*<><>*><>**

ಕೇಂದ್ರದ ಬಿಗಿ ಆಡಳಿತದ ಪರಿಣಾಮ ಈಶಾನ್ಯ ರಾಜ್ಯಗಳಲ್ಲಿ ಕಾನೂನು ಸುವ್ಯವಸ್ಥೆ ಉತ್ತಮವಾಗಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ. ಅಸ್ಸಾಂನಲ್ಲಿಂದು ನವೀಕರಿಸಿದ ಅತ್ಯಾಧುನಿಕ ಲಚಿತ್ ಬರ್ಫುಕನ್ ಪೊಲೀಸ್ ಅಕಾಡೆಮಿ ಉದ್ಘಾಟಿಸಿ ಅವರು ಮಾತನಾಡಿದರು. ಅಸ್ಸಾಂ ರಾಜ್ಯ ತ್ವರಿತವಾಗಿ ಅಭಿವೃದ್ಧಿ ಹೊಂದುತ್ತಿದೆ ಮತ್ತು ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ರಾಜ್ಯದಲ್ಲಿ ಶಾಂತಿ ಮರುಕಳಿಸಿದೆ. ರಾಜ್ಯದ ಬಹುತೇಕ ಎಲ್ಲಾ ಉಗ್ರಗಾಮಿ ಗುಂಪುಗಳು ಶಾಂತಿ ಮಾತುಕತೆಗಾಗಿ ಮುಂದೆ ಬಂದಿದ್ದು, ಅನೇಕರು ಶರಣಾಗಿದ್ದಾರೆ. ರಾಜ್ಯದಲ್ಲಿ ಯಾವುದೇ ಹಿಂಸಾಚಾರವಿಲ್ಲ ಮತ್ತು ಇದರ ಪರಿಣಾಮವಾಗಿ ವ್ಯಾಪಾರ ವಹಿವಾಟು ಉತ್ತಮವಾಗಿದ್ದು,

ಇದರ ಪರಿಣಾಮ ಯುವಕರಿಗೆ ಉದ್ಯೋಗಾವಕಾಶಗಳು ಲಭಿಸುತ್ತಿವೆ. ಕೇಂದ್ರ, ರಾಜ್ಯಕ್ಕೆ ೩ ಲಕ್ಷ ಕೋಟಿ ರೂಪಾಯಿಗಳ ಯೋಜನೆಗಳನ್ನು ಪ್ರಕಟಿಸಿದೆ. ಇದರಿಂದ ಈಶಾನ್ಯ ರಾಜ್ಯಗಳಲ್ಲಿ ಮೂಲಸೌಕರ್ಯ ಹಾಗೂ ಉದ್ಯೋಗ ಅವಕಾಶಗಳು ಹೆಚ್ಚಾಗಲಿದೆ ಎಂದು ಸಚಿವ ಅಮಿತ್ ಶಾ ಹೇಳಿದರು. ಈ ಸಂದರ್ಭದಲ್ಲಿ ಅಸ್ಸಾಂ ಮುಖ್ಯ ಮಂತ್ರಿ ಹಿಮಂತ ಬಿಸ್ವಾ ಶರ್ಮಾ ಮಾತನಾಡಿ, ರಾಜ್ಯ ಸರ್ಕಾರ, ಇದೇ ಕ್ಯಾಂಪಸ್‌ನಲ್ಲಿ ಪೊಲೀಸ್ ವೈದ್ಯಕೀಯ ಕಾಲೇಜು ಸ್ಥಾಪನೆಗೆ ಮುಂದಾಗಿದೆ ಎಂದು ಮುಖ್ಯಮಂತ್ರಿ ತಿಳಿಸಿದರು. ಕೇಂದ್ರ ಸಚಿವ ಸರ್ಬಾನಂದ ಸೋನೋವಾಲ್ ಮಾತನಾಡಿ, ಈ ಅತ್ಯಾಧುನಿಕ ಪೊಲೀಸ್ ಅಕಾಡೆಮಿಯ ಹೊಸ ಬಗೆಯ ಅಪರಾಧ ಕೃತ್ಯಗಳನ್ನು ತಡೆಗಟ್ಟಲು ದೇಶದಲ್ಲಿ ಅತ್ಯುತ್ತಮ ಪೊಲೀಸ್ ಸಿಬ್ಬಂದಿ ಒದಗಿಸಲಿದೆ ಎಂದು ಹೇಳಿದರು.

**<><*<><>*><>**

ರೈಲ್ವೆ ಇಲಾಖೆಯ ಕೆಳ ಸೇತುವೆ ಮತ್ತು ಮೇಲು ಸೇತುವೆಗಳನ್ನು ಕೇಂದ್ರ ಸರ್ಕಾರದ ಹಣದಿಂದಲೇ ನಿರ್ಮಾಣ ಮಾಡಲಾಗುವುದು ಎಂದು ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ತುಮಕೂರಿನಲ್ಲಿಂದು ತಿಳಿಸಿದ್ದಾರೆ. ಕರ್ನಾಟಕದ ತುಮಕೂರಿನಲ್ಲಿ ಪಾದಚಾರಿ ಸುರಂಗ ಮಾರ್ಗ ಕಾಮಗಾರಿಗೆ ಚಾಲನೆ ನೀಡಿ ಅವರು ಮಾತನಾಡಿದರು. ಏಪ್ರಿಲ್ ಅಂತ್ಯದೊಳಗಾಗಿ ತುಮಕೂರು ಹಾಸನ ಜಿಲ್ಲೆಯ ಲೆವೆಲ್ ಕ್ರಾಸಿಂಗ್ ಕಾಮಗಾರಿಗಳಿಗೆ ಚಾಲನೆ ನೀಡಲಾಗುವುದು ಮತ್ತು ಇದನ್ನು ೨೦೨೮ರ ವೇಳೆಗೆ ಪೂರ್ಣಗೊಳಿಸಿ ಲೋಕಾರ್ಪಣೆ ಮಾಡಲಾಗುವುದು ಎಂದು ರೈಲ್ವೆ ಸಚಿವ ಸೋಮಣ್ಣ ತಿಳಿಸಿದರು.

**ಧ್ವನಿ: ವಿ.ಸೋಮಣ್ಣ, ಕೇಂದ್ರ ಸಚಿವ**

**<><*<><>*><>**

ಸರ್ಕಾರಿ ಗುತ್ತಿಗೆ ಒಪ್ಪಂದಗಳಲ್ಲಿ ಕೆಲವು ಅಲ್ಪಸಂಖ್ಯಾತ ಸಮುದಾಯಕ್ಕೆ ಶೇಕಡ ೪ ರಷ್ಟು ಮೀಸಲಾತಿ ನೀಡುವ ಕರ್ನಾಟಕ ಸರ್ಕಾರದ ನಿರ್ಧಾರ ಸಂವಿಧಾನ ಬಾಹಿರವಾಗಿದೆ ಎಂದು ಬಿಜೆಪಿ ಆರೋಪಿಸಿದೆ. ನವದೆಹಲಿಯ ಬಿಜೆಪಿ ಕೇಂದ್ರ ಕಚೇರಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಪಕ್ಷದ ಹಿರಿಯ ನಾಯಕ ರವಿಶಂಕರ್ ಪ್ರಸಾದ್ ಸಂವಿಧಾನ ನಿಯಮಗಳ ಪ್ರಕಾರ ಧರ್ಮಾಧಾರಿತ ಮೀಸಲಾತಿಗೆ ಅವಕಾಶವಿಲ್ಲ ಎಂದರು. ಸಾಮಾಜಿಕ ಮತ್ತು ಶೈಕ್ಷಣಿಕ ಹಿಂದುಳಿದಿರುವಿಕೆ ಆಧಾರದ ಮೇಲೆ ಮೀಸಲಾತಿ ನೀಡಬೇಕು. ಆದರೆ ಕಾಂಗ್ರೆಸ್ ಸರ್ಕಾರ ಮತ ಬ್ಯಾಂಕ್ ರಾಜಕಾರಣ ಮಾಡುತ್ತಿದ್ದು, ಹೊಸ ಮೀಸಲಾತಿ ಮಾನದಂಡಗಳು ರಾಷ್ಟ್ರಕ್ಕೆ ಹಾನಿಕರವಾಗಲಿದೆ ಎಂದು ರವಿಶಂಕರ್ ಪ್ರಸಾದ್ ಆತಂಕ ವ್ಯಕ್ತಪಡಿಸಿದರು.

**ಧ್ವನಿ: ರವಿಶಂಕರ್ ಪ್ರಸಾದ್ ( ೧೪  ಸೆಕೆಂಡ್ )**

**<><*<><>*><>**

ಲಂಡನ್ ಸೆಂಟ್ರಲ್ ಬ್ಯಾಂಕ್‌ನ ೨೦೨೫ನೇ ಸಾಲಿನ ಡಿಜಿಟಲ್ ಟ್ರಾನ್ಸ್‌ಫರ್ಮೇಷನ್ ಪ್ರಶಸ್ತಿಗೆ ಭಾರತೀಯ ರಿಸರ್ವ್ ಬ್ಯಾಂಕ್ ಆಯ್ಕೆಯಾಗಿದೆ. ’ಪ್ರವಾಹ್’ ಮತ್ತು ’ಸಾರ್ಥಿ’ ಎಂಬ ಡಿಜಿಟಲ್ ಉಪಕ್ರಮಗಳಿಗಾಗಿ ಪ್ರಶಸ್ತಿ ನೀಡಲಾಗಿದೆ. ಜನವರಿ ೨೦೨೩ರಲ್ಲಿ ಸಾರ್ಥಿಯನ್ನು ಪ್ರಾರಂಭಿಸಲಾಯಿತು. ಇದು ದಾಖಲೆಗಳನ್ನು ಸುರಕ್ಷಿತವಾಗಿ ಸಂಗ್ರಹಿಸಲು ಮತ್ತು ಹಂಚಿಕೊಳ್ಳಲು ಅವಕಾಶ ಮಾಡಿಕೊಡಲಿದೆ.

<><*<><>*><>

ಮುಂದಿನ ವರ್ಷದ ಗಣರಾಜ್ಯೋತ್ಸವ ಸಂದರ್ಭದಲ್ಲಿ ಪ್ರಕಟಿಸಲಾಗುವ ೨೦೨೬ರ ಪದ್ಮ ಪ್ರಶಸ್ತಿಗಳಿಗಾಗಿ ನಾಮ ನಿರ್ದೇಶನ ಇಂದಿನಿಂದ ಆರಂಭವಾಗಿದೆ.  ಜುಲೈ ೩೧ ಕೊನೆಯ ದಿನವಾಗಿರುತ್ತದೆ. ನಾಮ ನಿರ್ದೇಶನಗಳನ್ನು ರಾಷ್ಟ್ರೀಯ ಪುರಸ್ಕಾರ ಪೋರ್ಟಲ್‌ನಲ್ಲಿ ಮಾತ್ರ ಸ್ವೀಕರಿಸಲಾಗುತ್ತದೆ. ಪ್ರದ್ಮ ಪ್ರಶಸ್ತಿಗಳಾದ, ಪದ್ಮ ವಿಭೂಷಣ, ಪದ್ಮ ಭೂಷಣ ಮತ್ತು ಪದ್ಮ ಶ್ರೀ ದೇಶದ ಅತ್ಯುನ್ನತ ನಾಗರಿಕ ಪ್ರಶಸ್ತಿಗಳಾಗಿವೆ. ಕಲೆ, ಸಾಹಿತ್ಯ, ಶಿಕ್ಷಣ, ಕ್ರೀಡೆ, ವಿಜ್ಞಾನ ಮುಂತಾದ ಹಲವು ವಲಯಗಳಲ್ಲಿ ಅಸಾಧಾರಣ ಕೊಡುಗೆ ಮತ್ತು ಸಾಧನೆ ಮಾಡಿದವರನ್ನು ಗುರುತಿಸಿ ಪ್ರಶಸ್ತಿ ನೀಡಲಾಗುತ್ತದೆ.

<><*<><>*><>

ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ- ಇಸ್ರೋ ಎಲ್.ವಿ.ಎಮ್-೩ ಉಡಾವಣಾ ವಾಹನದ ಎಲ್.ವಿ.ಎಮ್-ಎಮ್-೬ ಆರನೇ ಹಂತದ ಕಾರ್ಯಾಚರಣೆಗಾಗಿ ನಿಗದಿಪಡಿಸಿದ ಕ್ರಯೋಜೆನಿಕ್ ಎಂಜಿನ್ ಹಾರಾಟ ಪರೀಕ್ಷೆಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದೆ. ಈ ಪರೀಕ್ಷೆಯನ್ನು ತಮಿಳುನಾಡಿನ ಮಹೇಂದ್ರಗಿರಿಯಲ್ಲಿರುವ ಇಸ್ರೋದ ಪ್ರೊಪಲ್ಷನ್ ಕಾಂಪ್ಲೆಕ್ಸ್‌ನಲ್ಲಿ ನಡೆಸಲಾಯಿತು. ಇದು ಬಾಹ್ಯಾಕಾಶ ಯಾತ್ರಿಗಳಿಗೆ  ಕ್ರಯೋಜೆನಿಕ್ ಹಂತಗಳನ್ನು ವೇಗವಾಗಿ ತಲುಪಿಸಲು ಸಹಾಯ ಮಾಡುತ್ತದೆ ಎಂದು ಇಸ್ರೋ ಹೇಳಿಕೆಯಲ್ಲಿ ತಿಳಿಸಿದೆ.

<><*<><>*><>

ಥೈಲ್ಯಾಂಡ್‌ನಲ್ಲಿ ನಡೆದ ಡಬ್ಲ್ಯು-೩೫ ನಾಂತಬುರಿ ಮಹಿಳಾ ಡಬಲ್ಸ್ ವಿಭಾಗದಲ್ಲಿ ಭಾರತದ ವೈದೇಹಿ ಚೌಧರಿ ಮತ್ತು ರಶ್ಮಿಕಾ ಬಾಮಿಡಿಪತಿ ಜೋಡಿ ಪ್ರಶಸ್ತಿ ಮುಡಿಗೇರಿಸಿಕೊಂಡಿದೆ. ಫೈನಲ್ ಪಂದ್ಯದಲ್ಲಿ ಅವರು ಥೈಲ್ಯಾಂಡ್‌ನ ಪುನಿನ್ ಮತ್ತು ಜಪಾನ್‌ನ ಯುಕಿ ನೈಟೊ ಜೋಡಿಯನ್ನು ೬-೪, ೬-೩ ಸೆಟ್‌ಗಳಿಂದ ಪರಾಭವಗೊಳಿಸಿದೆ.

<><*<><>*><>

ಮಹಿಳಾ ಪ್ರೀಮಿಯರ್ ಲೀಗ್ ಕ್ರಿಕೆಟ್ ಫೈನಲ್ ಪಂದ್ಯ ಮುಂಬೈನ ಬ್ರಬಾರ್ನ್ ಕ್ರೀಡಾಂಗಣದಲ್ಲಿ ಇನ್ನು ಸ್ವಲ್ಪ ಹೊತ್ತಿನಲ್ಲಿ ಆರಂಭವಾಗಲಿದೆ. ಡೆಲ್ಲಿ ಕ್ಯಾಪಿಟಲ್ಸ್ ಹಾಗೂ ಮುಂಬೈ ಇಂಡಿಯನ್ಸ್ ತಂಡಗಳು ಪ್ರಶಸ್ತಿಗಾಗಿ ಸೆಣಸಾಟ ನಡೆಸಲಿವೆ. ಪಂದ್ಯ ಅಧಿಕೃತವಾಗಿ ರಾತ್ರಿ ೮ ಗಂಟೆಗೆ ಆರಂಭವಾಗಲಿದೆ.

<><*<><>*><>

ಇಂದು ವಿಶ್ವ ಗ್ರಾಹಕ ಹಕ್ಕುಗಳ ದಿನ.

ಗ್ರಾಹಕರ ಹಕ್ಕುಗಳು ಮತ್ತು ಅದರ ರಕ್ಷಣೆ ಎತ್ತಿಹಿಡಿಯುವ ಅಗತ್ಯವನ್ನು ನೆನಪಿಸುವ ಈ ದಿನವನ್ನು ಪ್ರತಿ ವರ್ಷ ಮಾರ್ಚ್ ೧೫ ರಂದು ಆಚರಿಸಲಾಗುತ್ತದೆ. ಎಲ್ಲಾ ಗ್ರಾಹಕರ ಮೂಲಭೂತ ಹಕ್ಕುಗಳನ್ನು ಉತ್ತೇಜಿಸಲು ಮತ್ತು ಆ ಹಕ್ಕುಗಳನ್ನು ಗೌರವಿಸಿ, ರಕ್ಷಿಸಿ, ಪ್ರೋತ್ಸಾಹಿಸಲು ಈ ದಿನ ಅವಕಾಶ ಒದಗಿಸುತ್ತದೆ.  'ಸುಸ್ಥಿರ ಜೀವನಶೈಲಿಯೆಡೆಗೆ ನ್ಯಾಯಯುತ ಪರಿವರ್ತನೆ' ಎಂಬುದು ೨೦೨೫ ರ ವಿಶ್ವ ಗ್ರಾಹಕ ಹಕ್ಕುಗಳ ದಿನದ ಧ್ಯೇಯವಾಕ್ಯವಾಗಿದೆ.

**<><*<><>*><>**

ಆಕಾಶವಾಣಿಯ ಜನಪ್ರಿಯ ಮಾಸಿಕ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ, ಇದೇ ೨೦ರ ಭಾನುವಾರ ಬೆಳಗ್ಗೆ ೧೧ ಗಂಟೆಗೆ ದೇಶ-ವಿದೇಶಗಳಲ್ಲಿರುವ ಭಾರತೀಯರೊಂದಿಗೆ ಅಲೋಚನೆ ಹಂಚಿಕೊಳ್ಳಲಿದ್ದಾರೆ. ಇದು 'ಮನ್ ಕಿ ಬಾತ್' ಕಾರ್ಯಕ್ರಮದ ೧೨೦ನೇ ಆವೃತ್ತಿಯಾಗಿದೆ.

**<><*<><>*><>**

ಜಾಗತಿಕ ವೇದಿಕೆಗಳಲ್ಲಿ ಸಾಮಾಜಿಕ ನ್ಯಾಯ ಮತ್ತು ಗುಣಮಟ್ಟದ ಕಾಯ್ದುಕೊಳ್ಳುವುದಕ್ಕೆ ಭಾರತ ಬದ್ಧವಾಗಿದೆ ಎಂದು ಕಾರ್ಮಿಕ ಸಚಿವಾಲಯದ ಕಾರ್ಯದರ್ಶಿ ಸಮಿತಾ ದಾವ್ರಾ ಹೇಳಿದ್ದಾರೆ. ಜಿನೀವಾದಲ್ಲಿ ನಡೆದ ಅಂತರರಾಷ್ಟ್ರೀಯ ಕಾರ್ಮಿಕ ಸಂಘಟನೆಯ ೩೫೩ ನೇ ಆಡಳಿತ ಮಂಡಳಿ ಸಭೆಯನ್ನು ಉದ್ದೇಶಿಸಿ ಅವರು ಮಾತನಾಡಿದರು. ಜಾಗತಿಕವಾಗಿ ಕಾರ್ಮಿಕ ಕಲ್ಯಾಣ, ಸಾಮಾಜಿಕ ನ್ಯಾಯ ಮತ್ತು ಗುಣಮಟ್ಟದ ಉದ್ಯೋಗ ಸೃಷ್ಟಿ ಉತ್ತೇಜಿಸುವ ಹಂಚಿಕೆ ಕಾರ್ಯಸೂಚಿಯನ್ನು ಮುನ್ನಡೆಸಲು ಭಾರತ ಬದ್ಧವಾಗಿದೆ ಎಂದರು.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೬.೦೫ ಕ್ಕೆ <>*><>**